**ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಹುಣಸೂರು.**

**ಸಿ.ಸಿ. ಸಂಖ್ಯೆ:287/2025**

**ಸಾಕ್ಷಿಯನ್ನು ದಿಃ 18.12.2025 ರಂದು ಕರೆಸಿ ಪ್ರಮಾಣವಚನ ಭೋದಿಸಲಾಯಿತು.**

| | | | |
|---|---|---|---|
| ಹೆಸರು | ಆದರ್ಶ್ | ಸಿಡಬ್ಲ್ಯೂ:5 | ಪಿಡಬ್ಲ್ಯೂ:4 |
| ತಂದೆಯ ಹೆಸರು | ರಾಜೇಗೌಡ | | |
| ವಯಸ್ಸು | 25 ವರ್ಷ | | |
| ಉದ್ಯೋಗ | ಲೋಡಿಂಗ್ ಕೆಲಸ | | |
| ವಾಸಸ್ಥಳ | ಮನುಗನಹಳ್ಳಿ, ಬಿಳಿಕೆರೆ. | | |

**ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ**

ನ್ಯಾಯಾಲಯದ ಮುಂದಿರುವ ಆರೋಪಿ ನನಗೆ ಗೊತ್ತು. ಸಾಕ್ಷಿಗೆ ಒಂದು ದಾಖಲೆ ತೋರಿಸಲಾಗಿ ಅದು ಸೀಜರ್ ಮಹಜರ್ ಆಗಿದ್ದು, ಅದರಲ್ಲಿ ಸಾಕ್ಷಿ ತನ್ನ ಸಹಿ ನೋಡಿ ಗುರುತಿಸಿದ್ದು, ಅದನ್ನು ನಿಪಿ. 14 ಎಂದು, ಸಾಕ್ಷಿಯ ಸಹಿಯನ್ನು ನಿಪಿ. 14(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ದಿಃ 20.01.2025 ರಂದು ಬಿಳಿಕೆರೆ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ದಾಖಲೆಯಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಆರೋಪಿ ಪೋನ್ ಮಾಡಿ ಕರೆದಿದ್ದರಿಂದ ಅಲ್ಲಿಗೆ ಹೋಗಿದ್ದು, ಅವರು ಹೇಳಿದ ಮೇರೆಗೆ ಸಹಿ ಮಾಡಿರುತ್ತೇನೆ. ನಾನು ಸಹಿ ಮಾಡಿದಾಗ ಬೆಳಿಗ್ಗೆ 10 ರಿಂದ 11 ಗಂಟೆ ಆಗಿತ್ತು. ಆ ಸಮಯದಲ್ಲಿ ನನ್ನ ಜೊತೆ ಕಿರಣ್ ಮತ್ತು ಆರೋಪಿ ಇದ್ದರು.

**(ಈ ಹಂತದಲ್ಲಿ ಮಾನ್ಯ ಸಸಅ ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿ ತನ್ನ ಸಾಕ್ಷ್ಯವನ್ನು ಅಭಿಯೋಜನೆಗೆ ಪ್ರತಿಕೂಲವಾಗಿ ನುಡಿದಿರುವ ಕಾರಣ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಸಲಾಯಿತು)**

**ಪಾಟೀಸವಾಲು ಸಸಅ ರವರಿಂದಃ–**

ಆ ದಿನ ಕೆಎ 09 ಎಎ 1670 ಅಶೋಕ್ ಲೈಲ್ಯಾಂಡ್ ದೋಸ್ತ ವಾಹನವನ್ನು ಪೊಲೀಸರು ನನ್ನ ಮತ್ತು ಚಾಸಾ 6 ರವರ ಸಮಕ್ಷಮ ಅಮಾನತ್ತು ಪಡಿಸಿಕೊಂಡರು ಎಂದರೆ ಸರಿಯಲ್ಲ. ಸದರಿ ವಾಹನವನ್ನು ನಮ್ಮ ಸಮಕ್ಷಮ ಅಮಾನತ್ತು ಪಡಿಸಿಕೊಂಡಿದ್ದರು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಪಿ.ಎನ್.ಕೆ ವಕೀಲರಿಂದಃ**

ಇರುವುದಿಲ್ಲ.

**ಮರುವಿಚಾರಣೆ ಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ.ಹೇ.ಕೇ.ಸ.ಇದೆ.,

(ಭಾಗ್ಯಮ್ಮ)
ಹೆಚ್ಚುವರಿ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆ.ಎಂ.ಎಫ್.ಸಿ.ಹುಣಸೂರು.